ಕಾಡಾನೆಗಳ ಹಾವಳಿ

396 (859) ಶ್ರೀ ಕುಮಾರಸ್ವಾಮಿ ಹೆಚ್.ಕೆ (ಸಕಲೇಶಪುರ) ಮಾನ್ಯ ಅರಣ್ಯ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ರಾಜ್ಯದ ವಿವಿಧ ಭಾಗಗಳಲ್ಲಿ ಕಾಡಾನೆಗಳ ಹಾವಳಿ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಕಾಡಾನೆ ಹಾವಳಿಯನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ರಾಜ್ಯದಲ್ಲಿ ಆಕಸ್ಮಿಕವಾಗಿ ಆನೆಗಳು ಸಾವಿಗೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಆಕಸ್ಮಿಕವಾಗಿ ಸಾವಿಗೀಡಾದ ಆನೆಗಳ ಸಂಖ್ಯೆ ಎಷ್ಟು; (ವಲಯವಾರು ವಿವರಗಳನ್ನು ನೀಡುವುದು);

(ಈ) ಸಕಲೇಶಪುರ ಮತ್ತು ಆಲೂರು ತಾಲ್ಲೂಕುಗಳಲ್ಲಿ ಕಾಡಾನೆಗಳ ಹಾವಳಿ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಹಾಗಿದ್ದಲ್ಲಿ, ಕಾಡಾನೆ ಹಾವಳಿಯನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಸಿ.ಪಿ. ಯೋಗೇಶ್ವರ (ಮಾನ್ಯ ಅರಣ್ಯ ಸಚಿವರು)

(ಅ) ರಾಜ್ಯದಲ್ಲಿ ಕಾಡಾನೆಗಳ ಹಾವಳಿ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಳ್ಳುತ್ತಿರುವ ಕ್ರಮಗಳು ಈ ಕೆಳಗಿನಂತಿದೆ.

1. ಕಾಡಾನೆಗಳು ಅರಣ್ಯ ಪ್ರದೇಶದಿಂದ ಪಕ್ಕದ ಕೃಷಿ ಹಾಗೂ ಸಾರ್ವಜನಿಕರ ಸ್ಥಳಗಳಲ್ಲಿ ದಾಳಿ ಮಾಡುವುದನ್ನು ತಡೆಗಟ್ಟುವ ಸಲುವಾಗಿ ಸೂಕ್ಷ್ಮ ಪ್ರದೇಶಗಳ ಅರಣ್ಯದ ಅಂಚಿನಲ್ಲಿ ಕಾಡಾನೆ ನಿರೋಧ ಕಂದಕ ಮತ್ತು ಸೋಲಾರ್ ತಂತಿಬೇಲಿ ನಿರ್ಮಿಸಲಾಗಿದೆ ಮತ್ತು ಇವುಗಳನ್ನು ನಿರ್ವಹಿಸಲಾಗುತ್ತಿದೆ.

2. ಕಾಡಾನೆಗಳು ಪದೇ ಪದೇ ಕೃಷಿ ಜಮೀನುಗಳಿಗೆ ದಾಳಿ ಮಾಡುವ ಸೂಕ್ಷ್ಮ ಸ್ಥಳಗಳನ್ನು ಗುರುತಿಸಿ ಹಾವಳಿ ನಡೆಸುವ ಕಾಡಾನೆಗಳನ್ನು ಪುನಃ ಕಾಡಿಗೆ ಓಡಿಸುವ ಸಲುವಾಗಿ ಕಾಡಾನೆ ತಡೆ ಕ್ಯಾಂಪುಗಳನ್ನು ಸ್ಥಾಪಿಸಿ, ಪ್ರತಿಯೊಂದು ಕ್ಯಾಂಪಿನಲ್ಲೂ ಸ್ಥಳಿಯರ ಜೊತೆಗೆ ನಾಲ್ಕು ಮಂದಿ ನುರಿತ ಅರಣ್ಯ ಸಿಬ್ಬಂದಿಗಳನ್ನು ನಿಯೋಜಿಸಿ ಕ್ರಮಕ್ಕೆ ಕೈಗೊಳ್ಳಲಾಗುತ್ತಿದೆ.

3. ಸದರಿ ಸಿಬ್ಬಂದಿಗಳಿಗೆ ವಾಕೀ-ಟಾಕಿ, ಗನ್ ಹಾಗೂ ವಾಹನಗಳ ಸೌಲಭ್ಯಗಳನ್ನು ಕಾಡಾನೆಗಳನ್ನು ಅರಣ್ಯ ಪ್ರದೇಶಗಳಿಗೆ ಹಿಮ್ಮೆಟ್ಟಿಸಲು ಒದಗಿಸಲಾಗುತ್ತಿದೆ.

4. ಸಿಬ್ಬಂದಿಗಳಿಗೆ ಪಟಾಕಿ ಇನ್ನಿತರ ಸಾಮಗ್ರಿಗಳನ್ನು ಒದಗಿಸಿ ಹಾವಳಿ ನಡೆಸುವ ಕಾಡಾನೆಗಳನ್ನು ಅರಣ್ಯ ಪ್ರದೇಶಗಳಿಗೆ ಹಿಮ್ಮೆಟ್ಟಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

5. ಸಾರ್ವಜನಿಕರ ಆಸ್ತಿ ಪಾಸ್ತಿಗಳಿಗೆ ಹಾಗೂ ಮಾನವ ಸಾವಿಗೆ ಕಾರಣವಾಗಿರುವ ಪುಂಡ ಕಾಡಾನೆಗಳನ್ನು ಗುರುತಿಸಿ ಅವುಗಳನ್ನು ಹಿಡಿದು ಅವುಗಳನ್ನು ಸ್ಥಳಾತರಿಸಲು ಕ್ರಮ ಕೈಗೊಳ್ಳಲಾಗಿದೆ.

(ಆ) ಬಂದಿದೆ.

(ಇ) ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ಆಕಸ್ಮಿಕವಾಗಿ ಕಾಡಾನೆಗಳು ಸಾವಿಗೀಡಾದ ವಿವರ ಕೆಳಗಿನಂತಿದೆ.

ಕ್ರ.ಸಂ.	ಆನೆಗಳು ಸಾವಿಗೀಡಾಗಲು ಕಾರಣ	ವರ್ಷ 2008-09	2009-10	2010-11
1	ಆಕಸ್ಮಿಕ ವಿದ್ಯುತ್‌ಚಕ್ತಿ ಸ್ಪರ್ಷದಿಂದ	21	22	13
2	ಸಾಂಕ್ರಾಮಿಕ ರೋಗದಿಂದ	6	–	16
3	ಗನ್ ಶೂಟ್‌ನಿಂದ	3	10	–
4	ಸ್ವಾಭಾವಿಕ ಸಾವು	101	103	85

(ಈ) ಸಕಲೇಶಪುರ ಮತ್ತು ಆಲೂರು ತಾಲ್ಲೂಕುಗಳಲ್ಲಿ ಕಾಡಾನೆಗಳ ಹಾವಳಿ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಅದರಂತೆ ಇದುವರೆಗೆ 11 ಪುಂಡಾನೆಗಳನ್ನು ಹಿಡಿದು ಸ್ಥಳಾಂತರಿಸಲಾಗಿದೆ.

(ಉ) ಹಾಸನ ಜಿಲ್ಲೆಯ ಸಕಲೇಶಪುರ, ಆಲೂರು ಅರಕಲಗೂಡು ತಾಲ್ಲೂಕುಗಳಲ್ಲಿ ಹೆಚ್ಚಾಗಿರುವ ಆನೆಗಳ ಹಾವಳಿಯನ್ನು ತಡೆಗಟ್ಟಲು ಸೂಕ್ಷ್ಮ ಪ್ರದೇಶಗಳ ಅರಣ್ಯದ ಅಂಚಿನಲ್ಲಿ 2006-07ನೇ ಸಾಲಿನಲ್ಲಿ ಒಟ್ಟು 9 ಕಿಮೀ ಕಾಡಾನೆ ನಿರೋಧಕ ಕಂದಕಗಳನ್ನು ನಿರ್ಮಿಸಿ

ಕಾಡಾನೆಗಳ ಹಾವಳಿಯನ್ನು ನಿಯಂತ್ರಿಸಲಾಗಿದೆ. ಹಾಗೂ 2009–10 ಮತ್ತು 2010–11ನೇ ಸಾಲಿನಲ್ಲಿ ಒಟ್ಟು 9.50 ಕಿಮೀ ಸೌರಶಕ್ತಿ ತಂತಿಬೇಲಿ ನಿರ್ಮಾಣ ಮಾಡಲಾಗಿದೆ. ಕಾಡಾನೆಗಳು ಪದೇ ಪದೇ ಕೃಷಿ ಜಮಿನುಗಳಿಗೆ ದಾಳಿ ಮಾಡುವ ಸೂಕ್ಷ್ಮ ಸ್ಥಳಗಳನ್ನು ಗುರುತಿಸಿ ಹಾವಳಿ ನಡೆಸುವ ಕಾಡಾನೆಗಳನ್ನು ಪುನಃ ಕಾಡಿಗೆ ಓಡಿಸುವ ಸಲುವಾಗಿ ಸಕಲೇಶಪುರ, ಅರಕಲಗೂಡು ಮತ್ತು ಆಲೂರು ತಾಲ್ಲೂಕುಗಳಲ್ಲಿ ಕಾಡಾನೆ ತಡೆ ಕ್ಯಾಂಪುಗಳನ್ನು ಸ್ಥಾಪಿಸಿ, ಪ್ರತಿಯೊಂದು ಕ್ಯಾಂಪಿನಲ್ಲೂ ಸ್ಥಳಿಯರ ಜೊತೆಗೆ ನಾಲ್ಕು ಮಂದಿ ನುರಿತ ಸಿಬ್ಬಂದಿಗಳನ್ನು ನಿಯೋಜಿಸಿ ಅವರುಗಳಿಗೆ ವಾಕೀ–ಟಾಕೀ, ಗನ್ನು ಹಾಗೂ ವಾಹನಗಳ ಸೌಲಭ್ಯಗಳನ್ನು ಒದಗಿಸಲಾಗಿದೆ. ಅಲ್ಲದೇ ಅವರುಗಳಿಗೆ ಪಟಾಕಿ ಇನ್ನಿತರ ಸಾಮಗ್ರಿಗಳನ್ನು ನೀಡಿ ಹಾವಳಿ ನಡೆಸುವ ಕಾಡಾನೆಗಳನ್ನು ಅರಣ್ಯ ಪ್ರದೇಶಗಳಿಗೆ ಹಿಮ್ಮೆಟ್ಟಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಕಾಡಾನೆಗಳ ಹಾವಳಿಯನ್ನು ಶಾಶ್ವತವಾಗಿ ತಡೆಗಟ್ಟಲು ತಜ್ಞರ ವರದಿಯಂತೆ ಈಗಾಗಲೇ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಕೇಂದ್ರ ಸರ್ಕಾರವು ಅನುಮತಿ ನೀಡಿರುವಂತೆ ಎಲ್ಲಾ 25 ಕಾಡಾನೆಗಳನ್ನು ಸೆರೆಹಿಡಿದು ಸ್ಥಳಾಂತರಿಸಲು ಕೇಂದ್ರ ಸರ್ಕಾರವು ದಿನಾಂಕ:11/11/2011 ರಂದು ಕೆಲವು ನಿಭಂಧನೆಗಳೊಂದಿಗೆ ಅನುಮತಿ ನೀಡಿರುತ್ತದೆ. ಈ ಕ್ರಮಕ್ಕೆ ರಾಜ್ಯ ಉಚ್ಚ ನ್ಯಾಯಾಲಯ ರಿಟ್ ಅರ್ಜಿ ಸಂಖ್ಯೆ: 14029/2008ಕ್ಕೆ ಸಂಬಂಧಿಸಿದಂತೆ ದಿನಾಂಕ: 17/11/2011ರಲ್ಲಿ ಸದರಿ ಆನೆಗಳನ್ನು ಸ್ಥಳಾಂತರಿಸುವ ಮುನ್ನ ತಜ್ಞರು ಹಾಗೂ ಅರಣ್ಯ ಇಲಾಖೆಯ ಅಧಿಕಾರಿಯವರ ಅಭಿಪ್ರಾಯ ಪಡೆದ ನಂತರ ಸ್ಥಳಾಂತರಿಸಲು ನಿರ್ದೇಶನ ನೀಡಿರುತ್ತದೆ. ಹಾಗೆಯೇ ನ್ಯಾಯಾಲಯವು ಕೇಂದ್ರ ಸರ್ಕಾರಕ್ಕೆ ಇದನ್ನು ಗಂಭೀರವಾಗಿ ಪರಿಗಣಿಸಲು ಹಾಗೂ ಆಫ್ರಿಕಾ ಮತ್ತು ಏಷ್ಯಾ ಖಂಡಗಳ ನುರಿತ ತಜ್ಞರನ್ನು ಒಳಗೊಂಡ ತಂಡದೊಂದಿಗೆ ವಿಮರ್ಶಿಸಿದ ನಂತರವೇ ಸ್ಥಳಾಂತರಿಸಲು ನಿರ್ದೇಶನ ನೀಡಿರುತ್ತದೆ. ಇದನ್ನೇ ಪುನರುಚ್ಚರಿಸಿ ಈ ಕಛೇರಿಯಿಂದ ಇನ್ಸ್‌ಪೆಕ್ಟರ್ ಜನರಲ್ ಆಫ್ ಫಾರೆಸ್ಟ್ ಹಾಗೂ ನಿರ್ದೇಶಕರು (ಆನೆಯೋಜನೆ). ಕೇಂದ್ರ ಸರ್ಕಾರದ ಅರಣ್ಯ ಮತ್ತು ಪರಿಸರ ಮಂತ್ರಾಲಯ, ನವದೆಹಲಿ ಇವರಿಗೆ ದಿನಾಂಕ: 29/11/2011 ರಂದು ಸೂಕ್ತ ಕ್ರಮ ಜರುಗಿಸಲು ಕೋರಲಾಗಿರುತ್ತದೆ.

ಸರ್ಕಾರದ ಆದೇಶ ಸಂಖ್ಯೆ: ಅಪಜೀ 143 ಎಫ್‌ಡಬ್ಲ್ಯೂಎಲ್ 2010 ಬೆಂಗಳೂರು, ದಿನಾಂಕ 30.04.2011 ಮತ್ತು 03.08.2011ರಲ್ಲಿ ತಿಳಿಸಿರುವಂತೆ ಕಾಡಾನೆಗಳ ಹಾವಳಿಯಿಂದ

ಉಂಟಾದ ರೈತರ ಬೆಳೆಗಳ ನಷ್ಟಕ್ಕೆ, ಕಾಡಾನೆಗಳ ದಾಳಿಯಿಂದ ಗಾಯಗೊಂಡವರಿಗೆ ಹಾಗೂ ಮೃತಪಟ್ಟ ವಾರಸುದಾರರಿಗೆ ಪರಿಹಾರ/ದಯಾತ್ಮಕ ಧನವನ್ನು ನೀಡಲಾಗುತ್ತಿದೆ.

ಆಸ್ಪತ್ರೆಯನ್ನು ಸ್ಥಳಾಂತರಿಸುವುದು

397 (860) ಶ್ರೀ ಕುಮಾರಸ್ವಾಮಿ ಹೆಚ್.ಕೆ (ಸಕಲೇಶಪುರ) ಮಾನ್ಯ ಜಲಸಂಪನ್ಮೂಲ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಹಾಸನ ತಾಲ್ಲೂಕು, ಕಟ್ಟಾಯ ಹೋಬಳಿಯ, ಗೊರೂರು ಗ್ರಾಮದಲ್ಲಿ ನೀರಾವರಿ ಇಲಾಖೆಯವರು ನಿರ್ವಹಣೆ ಮಾಡುತ್ತಿರುವ ಪ್ರಾಥಮಿಕ ಆರೋಗ್ಯ ಕೇಂದ್ರವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ ಈ ಕೇಂದ್ರಕ್ಕೆ ರೋಗಿಗಳು ಬಾರದೇ ನಿರುಪಯುಕ್ತವಾಗಿರುವುದರಿಂದ ಇಲಾಖೆಯವರು ಸ್ಥಳಾಂತರಕ್ಕೆ ಶಿಫಾರಸ್ಸು ಮಾಡಿರುವುದು ನಿಜವೇ;

(ಇ) ಹಾಗಿದ್ದಲ್ಲಿ ಈ ಕೇಂದ್ರವನ್ನು ಗೊರೂರಿನಿಂದ 8 ಕಿ.ಮೀ. ದೂರದಲ್ಲಿರುವ ಹೋಬಳಿ ಕೇಂದ್ರ ಕಟ್ಟಾಯ ಗ್ರಾಮಕ್ಕೆ ಸ್ಥಳಾಂತರಿಸುವ ಉದೇಶ ಸರ್ಕಾರಕ್ಕಿದೆಯೇ?

ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಜಲಸಂಪನ್ಮೂಲ ಸಚಿವರು)

(ಅ) ಸರ್ಕಾರದ ಆದೇಶ ಸಂಖ್ಯೆ: ಪಿಡಬ್ಲ್ಯೂಡಿ 338 ಎಸ್‌ಸಿಓ 68, ದಿನಾಂಕ: 16–06–1969, ರಲ್ಲಿ ಹೇಮಾವತಿ ವಸಾಹತು ಕಾಲೋನಿ ಗೊರೂರುನಲ್ಲಿ ಹೇಮಾವತಿ ಜಲಾಶಯ ಆಸ್ಪತ್ರೆಯನ್ನು ಸ್ಥಾಪನೆ ಮಾಡಲಾಗಿರುತ್ತದೆ.

(ಆ) ಹೇಮಾವತಿ ಜಲಾಶಯ ಆಸ್ಪತ್ರೆಯನ್ನು ಮಾತೃ ಇಲಾಖೆಯಿಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ವಹಿಸಿಕೊಳ್ಳಲು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯನ್ನು ಕೋರಲಾಗಿರುತ್ತದೆ.

(ಇ) ಹೇಮಾವತಿ ಜಲಾಶಯ ಆಸ್ಪತ್ರೆಯನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ವಹಿಸಿಕೊಂಡ ನಂತರ ಸ್ಥಳಾಂತರಿಸುವ ಬಗ್ಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಮುಂದಿನ ಕ್ರಮ ಕೈಗೊಳ್ಳಬೇಕಾಗಿರುತ್ತದೆ.

ಶೀತಪೀಡಿತ ಹಳ್ಳಿಗಳು

398 (861) ಶ್ರೀ ಕುಮಾರಸ್ವಾಮಿ ಹೆಚ್.ಕೆ (ಸಕಲೇಶಪುರ) ಮಾನ್ಯ ಜಲಸಂಪನ್ಮೂಲ ಸಚಿವರು ದಯೆಯಿಟ್ಟು ಈ ಪ್ರಶ್ನೆಗಳಿಗೆ ಉತ್ತರಿಸುವರೆ:–